# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/71 /2021-22, ದಿನಾಂಕ : 10-6-2021

ದಿನಾಂಕ: 07-06-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಸಿ. ಗೋವಿಂದರಾಜುಲು | ಕಂದಾಯ ಪರಿವೀಕ್ಷಕರು | 9900691698 |
| 4 | ಡಾ!!. ಮಂಜುನಾಥ.ಎಸ್.ಎಲ್. | ಟ್ರಯಾಜ್ ಸೆಂಟರ ನೋಡಲ್ ಅಧಿಕಾರಿಗಳು | 9900469886 |
| 5 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 6 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 7 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 8 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ:-07-06-2021ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ಎಸ್.ವೆಂಕಟೇಶ್ ರವರು ಮಾತನಾಡಿ ಎಂ.ಎಂ.ವಿ.ರಸ್ತೆ ಹಾಗೂ ಜೈನ್ ಕಾಲೇಜ್ ಹಿಂಭಾಗದ ಕನ್ಸರ್‌ವೆನ್ಸಿ ರಸ್ತೆಯಲ್ಲಿ ಶೇಖರಣೆಯಾಗಿದ್ದ ಡೆಬ್ರೀಸ್‌ಅನ್ನು ತೆರವುಗೊಳಿಸುವಂತೆ ವಾಟ್ಸ್‌ಆಪ್ ಮುಖಾಂತರ ಕೋರಲಾಗಿದ್ದ ಮೇರೆಗೆ ಬಿಬಿಎಂಪಿ ಸಿಬ್ಬಂಧಿಗಳು ಕೂಡಲೇ ಸ್ಪಂದಿಸಿ ಡೆಬ್ರೀಸನ್ನು ತೆರವುಗೊಳಿಸಿ ಸ್ವಚ್ಛ ಮಾಡಿರುವುದಕ್ಕೆ ಸಭೆಯಲ್ಲಿ ಶ್ಲಾಘನೆ ವ್ಯಕ್ತಪಡಿಸಿದ್ದಲ್ಲದೆ ಧನ್ಯವಾದನಗಳನ್ನು ಸಹ ತಿಳಿಸಿದರು.

Scanned by CamScanner

ನಂತರ ಪುನಃ ಶ್ರೀ.ಎಸ್.ವೆಂಕಟೇಶ್ ರವರು ಮಾತನಾಡಿ ಎಂ.ಎಂ.ವಿ.ರಸ್ತೆ ವಾಸವಿ ಶಾಲೆ ಮುಂಭಾಗದಲ್ಲಿ ಹಸುಗಳನ್ನು ಕಟ್ಟುತ್ತಿದ್ದು ಅವುಗಳನ್ನು ಸದರಿ ಸ್ಥಳದಲ್ಲಿ ಕಟ್ಟದಂತೆ ತೆರವುಗೊಳಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಚರ್ಚಿಸಲಾಗಿ ಸದರಿ ವಿಚಾರವಾಗಿ ಸೂಕ್ತ ಕ್ರಮವಹಿಸಲು ಬಿಬಿಎಂಪಿ ಪಶುಸಂಗೋಪನಾ ವಿಭಾಗದ ಅಧಿಕಾರಿಗಳಿಗೆ ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಹಿಂದಿನ ವಾರ್ಡ್ ಸಮಿತಿ ಸಭೆಗಳಲ್ಲಿ ಪ್ರಸ್ತಾಪಿಸಿದ್ದ ಈ ಕೆಳಕಂಡ ವಿಚಾರಗಳನ್ನು ಪುನಃ ಪ್ರಸ್ತಾಪಿಸಿ ಇವುಗಳು ಇನ್ನೂ ಅನುಷ್ಠಾನಗೊಂಡಿರುವುದಿಲ್ಲ ಎಂದು ಸಭೆಯ ಗಮನಕ್ಕೆ ತಂದರು. ಅವುಗಳೆಂದರೆ.

1. ಕನಕಪುರ ರಸ್ತೆ ಮಾಧವರಾವ್ ಸರ್ಕಲ್‌ನಿಂದ ವಾಣಿ ವಿಲಾಸ ರಸ್ತೆವರೆಗೆ ವೈಟ್ ಟಾಪಿಂಗ್ ಕಾಂಕ್ರೀಟ್ ರೋಡ್ ವರ್ಕ್ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ.
2. ಕೆ.ಆರ್.ರಸ್ತೆ, ಹೆಚ್.ಬಿ.ಸಮಾಜ ರಸ್ತೆ ಜಂಕ್ಷನ್‌ನಲ್ಲಿರುವ ಹೂವಿನ ಗಿಡಗಳು ಹಾಗೂ ಕುಂಡಗಳ ಮಾರಾಟ ಮಳಿಗೆಯನ್ನು ತೆರವುಗೊಳಿಸುವ ಬಗ್ಗೆ.
3. ಶ್ರೀರಾಮ ಮಂದಿರ ರಸ್ತೆ ಕನ್ಸರ್‌ವೆನ್ಸಿಯಲ್ಲಿ ಹಸುಗಳನ್ನು ಕಟ್ಟಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಅದನ್ನು ತೆರವುಗೊಳಿಸುವ ಬಗ್ಗೆ ಹಾಗೂ ಗೋವಿಂದಪ್ಪ ರಸ್ತೆಯಲ್ಲಿನ ಖಾಲಿ ನಿವೇಶನದಲ್ಲಿ ಸಹ ಹಸುಗಳನ್ನು ಕಟ್ಟುತ್ತಿದ್ದು ಅವುಗಳನ್ನು ಸಹ ತೆರವುಗೊಳಿಸುವ ಬಗ್ಗೆ.
4. ಆರ್.ವಿ.ರಸ್ತೆ ಮೆಟ್ರೋ ನಿಲ್ದಾಣದ ಬಳಿ ಬಸ್ ಶೆಲ್ಟರ್ ಅನ್ನು ನಿರ್ಮಾಣ ಮಾಡುವ ಬಗ್ಗೆ.
5. ಸರ್ವೇಯರ್ ರಸ್ತೆ ಕನ್ಸರ್‌ವೆನ್ಸಿ ರಸ್ತೆಯಲ್ಲಿರುವ ನಾನ್‌ವೆಜ್ ಹೋಟೆಲ್ ಅನ್ನು ತೆರವುಗೊಳಿಸುವ ಬಗ್ಗೆ.
6. ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಬೊಲಾರ್ಡ್ಸ್‌ಗಳನ್ನು ಅಳವಡಿಸುವ ಬಗ್ಗೆ.

ಈ ವಿಚಾರಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕ್ರಮ ಸಂಖ್ಯೆ (1) ಮತ್ತು (6)ರ ವಿಷಯವಾಗಿ ಬಿ.ಬಿ.ಎಂ.ಪಿ. ಪ್ರಾಜೆಕ್ಟ್ ವಿಭಾಗಕ್ಕೆ ಕ್ರಮಕೈಗೊಳ್ಳಲು ಇನ್ನೊಮ್ಮೆ ತಿಳಿಸಲಾಗುವುದೆಂದು ಹಾಗೂ ಕ್ರಮ ಸಂಖ್ಯೆ: (3) ರ ವಿಚಾರವಾಗಿ ಕ್ರಮ ವಹಿಸಲು ಬಿಬಿಎಂಪಿ ಪಶುಸಂಗೋಪನಾ ವಿಭಾಗದ ಅಧಿಕಾರಿಗಳನ್ನು ಹಾಗೂ ಕ್ರಮ ಸಂಖ್ಯೆ: (5) ರ ಬಗ್ಗೆ ಕ್ರಮವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸುವುದಾಗಿ ಮತ್ತು ಕ್ರಮ ಸಂಖ್ಯೆ: (2) ರ ವಿಷಯವಾಗಿ ಸೂಕ್ತ ಕ್ರಮ ವಹಿಸಲು ವಾರ್ಡಿನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

10/6/2021.
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

10/6/2021
ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner